**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 235 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:23-03-2019.

ಇಂದ:

ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
**ಬೆಂಗಳೂರು.**

ಇವರಿಗೆ:

ಎಲ್ಲಾ ಜಿಲ್ಲಾ ಪಂಚಾಯತ್‌ಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೆ,

**ವಿಷಯ:** ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಿರುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ:ಇಡಿ 64 ಎಲ್‌ಐಬಿ 2015 ದಿನಾಂಕ: 26-02-2019.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಆದೇಶದಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಿ ಆದೇಶಿಸಲಾಗಿದೆ. (ಪ್ರತಿ ಲಗತ್ತಿಸಿದೆ.) ಸದರಿ ಆದೇಶದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಧೀನದಲ್ಲಿರುವ ಗ್ರಾಮ ಪಂಚಾಯತಿ ಗ್ರಂಥಾಲಯಗಳ ಸಂಪೂರ್ಣ ನಿರ್ವಹಣೆಯನ್ನು ದಿನಾಂಕ:01-03-2019 ರಿಂದ ಜಾರಿಗೆ ಬರುವಂತೆ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಲಾಗಿರುತ್ತದೆ. ಅನುದಾನವನ್ನು ಒಳಗೊಂಡಂತೆ ಹಾಗೂ ಗ್ರಾಮ ಪಂಚಾಯತಿಗಳು ವಸೂಲಿ ಮಾಡುವ ಗ್ರಂಥಾಲಯ ಉಪಕರವನ್ನು (ಸೆಸ್) ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಬಳಸಬೇಕೆಂದು ತಿಳಿಸಿರುತ್ತದೆ.

ಆದುದರಿಂದ ಗ್ರಾಮ ಪಂಚಾಯತಿಗಳು ದಿನಾಂಕ:01-03-2019 ರಿಂದ ಜಾರಿಗೆ ಬರುವಂತೆ ಗ್ರಂಥಾಲಯಗಳ ಸಂಪೂರ್ಣ ನಿರ್ವಹಣೆಯನ್ನು ಹಸ್ತಾಂತರಿಸಿಕೊಳ್ಳುವಂತೆ ತಿಳಿಸಿದೆ ಹಾಗೂ ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಗಾಗಿ ಅನುದಾನವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ಬಿಡುಗಡೆ ಮಾಡಲಾಗುವುದು ಮತ್ತು ಗ್ರಂಥಾಲಯ ಉಪಕರವನ್ನು (ಸೆಸ್) ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಗಾಗಿ ಉಪಯೋಗಿಸಲು ಕ್ರಮ ಕೈಗೊಳ್ಳುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಮುಬಾರಕ್ ಅಹ್ಮದ್) 20/3/19
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ:**

1. ಸರ್ಕಾರದ ಅಧೀನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ (ಸಾಮಾನ್ಯ) ಬಹುಮಹಡಿ ಕಟ್ಟಡ, ಬೆಂಗಳೂರು.
2. ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
4. ಸಿಸ್ಟಮ್ ಮ್ಯಾನೇಜರ್, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ. (ವೆಬ್ ಸೈಟ್‌ನಲ್ಲಿ ಅಳವಡಿಸಲು)
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

CS Scanned with CamScanner

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮಪಂಚಾಯಿತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ಗ್ರಾಮಪಂಚಾಯಿತಿಗಳಿಗೆ ವರ್ಗಾಯಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ:ಗ್ರಾಅಪ 369 ಗ್ರಾಪಂಅ 2014, ದಿನಾಂಕ:28.01.2015.
2. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ: ಸಾಗ್ರಂಇ/ನಿಕ/ಅವಿ.ಬಿ1/ಗ್ರಾ.ಪಂ.ಗ್ರಂ./105/939/2015-16, ದಿನಾಂಕ: 18.05.2016 ಮತ್ತು ಸಾಗ್ರಂಇ/ನಿಕ/ಯೋವಿ/41/ರಾವಯೋ/3035/2017-18, ದಿನಾಂಕ:18.08.2017.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ನೀಡಿರುವ ಅಭಿಪ್ರಾಯ ದಿನಾಂಕ: 26.02.2018.

******

ಪ್ರಸ್ತಾವನೆ:

ಮೇಲೆ ಓದಲಾದ (1) ರ ಅರೆ ಸರ್ಕಾರಿ ಪತ್ರದಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 312 ರಂತೆ ಆಡಳಿತ ವಿಕೇಂದ್ರೀಕರಣದಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳನ್ನು ಇನ್ನು ಹೆಚ್ಚು ಸ್ವತಂತ್ರವಾಗಿ ಕಾರ್ಯನಿರ್ವಹಿಸಲು ಶಕ್ತವಾಗುವಂತೆ ಮತ್ತು ಅವುಗಳನ್ನು ಬಲಪಡಿಸುವ ನಿಟ್ಟಿನಲ್ಲಿ ವಿವಿಧ ಪಂಚಾಯತ್ ರಾಜ್ ಸಂಸ್ಥೆಗಳು ನಿರ್ವಹಿಸುತ್ತಿರುವ ಕೆಲವು ಕಾರ್ಯ ಚಟುವಟಿಕೆಗಳನ್ನು ಪುನರ್ ವಿಂಗಡಿಸಿ ಗ್ರಂಥಾಲಯಗಳಿಗೆ ಸಂಬಂಧಿಸಿದಂತೆ 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳ ನಡುವೆ ಕಾರ್ಯಹಂಚಿಕೆಯನ್ನು ಮಾಡಲಾಗಿದೆ. ಅವುಗಳು ಗ್ರಂಥಾಲಯ ನಿರ್ಮಾಣ ಹಾಗೂ ನಿರ್ವಹಣೆ, ಗ್ರಂಥಾಲಯ ನಿರ್ವಹಣೆ, ದೇಣಿಗೆ ಸಂಗ್ರಹಿಸಿ ಅದರಲ್ಲಿ ಪುಸ್ತಕ ಸಂಗ್ರಹಿಸುವುದು, ಭಾಷಾ ಪತ್ರಿಕೆಗಳು ಮತ್ತು ನಿಯತಕಾಲಿಕೆಗಳಿಗೆ ಚಂದಾದಾರರಾಗುವುದು ಆಗಿರುತ್ತದೆ. ಗ್ರಾಮ ಪಂಚಾಯಿತಿಗಳು ಸ್ಥಳೀಯ ಸಂಸ್ಥೆಗಳಾದ್ದರಿಂದ ಗ್ರಾಮ ಗ್ರಂಥಾಲಯಗಳ ಉತ್ತಮ ಮೇಲ್ವಿಚಾರಣೆ, ಬಲಪಡಿಸುವಿಕೆ ಮತ್ತು ಅಭಿವೃದ್ಧಿಗೆ ಸಹಾಯವಾಗುವುದರಿಂದ ಗ್ರಾಮ ಪಂಚಾಯಿತಿಗಳ ಗ್ರಂಥಾಲಯಗಳನ್ನು ಗ್ರಾಮ ಪಂಚಾಯಿತಿಗಳ ಮೇಲ್ವಿಚಾರಣೆಯನ್ನು ತಂದು ಅವರ ಮೂಲಕ ಅನುದಾನ ನೀಡುವ ಪದ್ಧತಿ ಪುನಃ ಜಾರಿಗೆ ತರಲು ಕೋರಲಾಗಿದೆ.

ಮೇಲೆ ಓದಲಾದ (2) ರ ಪತ್ರಗಳಲ್ಲಿ ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ಇವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಕೋರಿರುವ ಪ್ರಸ್ತಾವನೆಯ ಕುರಿತು ಈ ಕೆಳಕಂಡಂತೆ ಅಭಿಪ್ರಾಯವನ್ನು ನೀಡಿರುತ್ತಾರೆ.

ದಿನಾಂಕ:18.08.2017ರ ಪತ್ರದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯಡಿ ರಾಜ್ಯಾದ್ಯಂತ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಜಿಲ್ಲಾ ಪಂಚಾಯಿತಿ ವಶಕ್ಕೆ ವಹಿಸಲಾಗಿರುತ್ತದೆ. ಅದರಂತೆ ಗ್ರಾಮ ಪಂಚಾಯಿತಿಗಳಿಗೆ ಕರ್ನಾಟಕ ಸಾರ್ವಜನಿಕ ಗ್ರಂಥಾಲಯ ಅಧಿನಿಯಮ 1965ರ ಪ್ರಕರಣ 29(3)ರಲ್ಲಿನ ಅವಕಾಶದಂತೆ ಗ್ರಾಮ ಪಂಚಾಯಿತಿ ಆಡಳಿತ ನಿರ್ವಹಣೆಗೆ ಮಾದರಿ ಉಪ ಕಾನೂನುಗಳಾಗಿ "ಕರ್ನಾಟಕ ಗ್ರಾಮ ಪಂಚಾಯಿತಿ ಗ್ರಂಥಾಲಯಗಳು (ಆಡಳಿತಾತ್ಮಕ ಹಾಗೂ ತಾಂತ್ರಿಕ) ವಿನಿಯಮಗಳು 2006" ಅನ್ನು ಜಾರಿ ಮಾಡಲಾಗಿರುತ್ತದೆ. ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಮೇಲ್ವಿಚಾರಕರ ಗೌರವ ಸಂಭಾವನೆ ಹಾಗೂ ನಿರ್ವಹಣೆಗೆ ಸಂಬಂಧಿಸಿರುವ ಅನುದಾನವನ್ನು ಮಾತ್ರ ಲೆಕ್ಕಶೀರ್ಷಿಕೆ:2205-00-059-04-101ರ ಅಡಿಯಲ್ಲಿ ಜಿಲ್ಲಾವಲಯದಿಂದ ರಾಜ್ಯವಲಯಕ್ಕೆ ಅಂದರೆ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ವರ್ಗಾಯಿಸಲಾಗಿರುತ್ತದೆ ಮತ್ತು ಗ್ರಾಮ ಪಂಚಾಯಿತಿಗಳು ಸ್ಥಳೀಯ ಸಂಸ್ಥೆಗಳಾದ್ದರಿಂದ ಉತ್ತಮ ಮೇಲ್ವಿಚಾರಣೆ ಬಲಪಡಿಸುವಿಕೆ ಮತ್ತು ಅಭಿವೃದ್ಧಿಗೆ ಸಹಾಯವಾಗುವುದರಿಂದ ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಸಂಪೂರ್ಣ ನಿರ್ವಹಣೆ ಹಾಗೂ ಅನುದಾನವನ್ನು ಒಳಗೊಂಡಂತೆ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಲು ಇಲಾಖೆಯ ಯಾವುದೇ

Scanned with CamScanner

ಅಭ್ಯಂತರವಿರುವುದಿಲ್ಲ ಹಾಗೂ ರಾಜ್ಯಾದ್ಯಂತ ಒಟ್ಟು 5766 ಗ್ರಾಮಪಂಚಾಯಿತಿ ಗ್ರಂಥಾಲಯಗಳು ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಈ ಕೆಳಗಿನಂತೆ ಅಭಿಪ್ರಾಯ ನೀಡಿರುತ್ತದೆ.

"ಶಿಕ್ಷಣ ಇಲಾಖೆ ವತಿಯಿಂದ ಗ್ರಂಥಾಲಯಗಳ ನಿರ್ವಹಣೆ, ಮೇಲ್ವಿಚಾರಕರ ವೇತನ, ಪುಸ್ತಕಗಳ ಖರೀದಿಗೆ ವಾರ್ಷಿಕವಾಗಿ ನೀಡುವ ಅನುದಾನವನ್ನು ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡುವ ಮತ್ತು ಗ್ರಂಥಾಲಯ ಮೇಲ್ವಿಚಾರಕರ ನೇಮಕಾತಿ ಅಧಿಕಾರವನ್ನು ಗ್ರಾಮ ಪಂಚಾಯತಿಗಳಿಗೆ ನೀಡುವ ಸಹಮತಿ ನೀಡಿದೆ."

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಧೀನದಲ್ಲಿರುವ ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಸಂಪೂರ್ಣ ನಿರ್ವಹಣೆಯನ್ನು ಅನುದಾನವನ್ನೂ ಒಳಗೊಂಡಂತೆ ಗ್ರಾಮ ಪಂಚಾಯಿತಿಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮೂಲಕ ವರ್ಗಾಯಿಸಲು ನಿರ್ಣಯಿಸಿದ್ದು, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 64 ಎಲ್‌ಬಿಬಿ 2015, ಬೆಂಗಳೂರು, ದಿನಾಂಕ: 26.02.2019**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಧೀನದಲ್ಲಿರುವ ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಸಂಪೂರ್ಣ ನಿರ್ವಹಣೆಯನ್ನು ಅನುದಾನವನ್ನು ಒಳಗೊಂಡಂತೆ ಹಾಗೂ ಗ್ರಂಥಾಲಯ ಸೆಸ್ ಅನ್ನು ತಪ್ಪದೇ ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಬಳಸಬೇಕೆಂದು ತಿಳಿಸುತ್ತಾ, ಗ್ರಾಮ ಪಂಚಾಯತಿ ಗ್ರಂಥಾಲಯಗಳನ್ನು ಗ್ರಾಮ ಪಂಚಾಯಿತಿಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮೂಲಕ ದಿನಾಂಕ : 01.03.2019 ರಿಂದ ಜಾರಿಗೆ ಬರುವಂತೆ ವರ್ಗಾಯಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಆದೇಶಿಸಿದೆ

- ಈಗಾಗಲೇ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ರಾಜ್ಯ ವಲಯದ ಮುಂದುವರಿಕೆ ಕಾರ್ಯಕ್ರಮದಡಿ ಲೆಕ್ಕಶೀರ್ಷಿಕೆ:2205-00-105-0-04-101ರಲ್ಲಿ ಗ್ರಾಮಪಂಚಾಯಿತಿ ಗ್ರಂಥಾಲಯಗಳ ನಿರ್ವಹಣೆಗಾಗಿ ಮೊತ್ತ ಬಿಡುಗಡೆಯಾಗಿದ್ದು, ಸದರಿ ಮೊತ್ತವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ಗ್ರಾಮಪಂಚಾಯಿತಿಗಳಿಗೆ ವರ್ಗಾಯಿಸಿರುವುದನ್ನು ಖಾತ್ರಿ ಪಡಿಸಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : 343 ವೆಚ್ಚ-8/2018, ದಿನಾಂಕ : 19.03.2018 ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ದಿನಾಂಕ : 26.02.2018 ರಂದು ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೇಖರ) 26/02/2019
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ.),
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ (ಸಾಮಾನ್ಯ).

ಇವರಿಗೆ:

1) ಮಹಾಲೇಖಪಾಲರು, (ಎ. & ಇ.), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

Scanned with CamScanner

3) ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು - ಮುಂದಿನ ಅಗತ್ಯ ಕ್ರಮಕ್ಕಾಗಿ.
4) ಉಪ ಕಾರ್ಯದರ್ಶಿಗಳು, ಸಚಿವ ಸಂಪುಟ ಶಾಖೆ, ವಿಧಾನ ಸೌಧ, ಬೆಂಗಳೂರು - (ಸಚಿವ ಸಂಪುಟದ ವಿಷಯ ಸಂಖ್ಯೆ: ಸಿ.72/2019, ದಿನಾಂಕ: 30.01.2019)
5) ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು.
6) ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಯವರಿಗೆ (ನಿರ್ದೇಶಕರ ಮುಖಾಂತರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ).
7) ರಾಜ್ಯದಲ್ಲಿರುವ ಎಲ್ಲಾ ಜಿಲ್ಲೆಗಳ / ನಗರಗಳ ಉಪ ನಿರ್ದೇಶಕರು / ಮುಖ್ಯ ಗ್ರಂಥಾಲಯಾಧಿಕಾರಿಗಳಿಗೆ (ನಿರ್ದೇಶಕರ ಮುಖಾಂತರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ).
8) ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ.
9) ಶಾಖಾರಕ್ಷಾ ಕಡತ / ಹೆಚ್ಚುವರಿ ಪ್ರತಿ.

Scanned with CamScanner